ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ಲೋಕಸೇವಾ ಆಯೋಗ (K.P.S.C)

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ    ದಿನಾಂಕ : DATE : 16/06/2019

# ಉಪ ನೋಂದಣಾಧಿಕಾರಿ ಹುದ್ದೆಗೆ 41 ಮಂದಿ ನೇಮಕ

16/6/19

ಬೆಂಗಳೂರು: ಕರ್ನಾಟಕ ಲೋಕಸೇವಾ ಆಯೋಗದಿಂದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ 'ಗ್ರೂಪ್'ಸಿ' ವೃಂದದ ಮತ್ತು ಉಪ ನೋಂದಣಾಧಿಕಾರಿ ಹುದ್ದೆಗೆ 41 ಮಂದಿಯನ್ನು ನೇಮಕ ಮಾಡಿ ಶನಿವಾರ ಆದೇಶ ಹೊರಡಿಸಲಾಗಿದೆ. ಉಳಿದ 23 ಅಭ್ಯರ್ಥಿಗಳ ದಾಖಲಾತಿಗಳ ಸೈಜತೆಯ ಪರಿಶೀಲನೆಯಲ್ಲಿದ್ದು, ಬಳಿಕ ಪ್ರತ್ಯೇಕ ನೇಮಕಾತಿ ಆದೇಶಗಳನ್ನು ಹೊರಡಿಸಲಾಗುವುದು ಎಂದು ಆದೇಶದಲ್ಲಿ ತಿಳಿಸಲಾಗಿದೆ.

ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಉಪ ನೋಂದಣಾಧಿಕಾರಿ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ ಹೈದ್ರಬಾದ್-ಕರ್ನಾಟಕ ಸ್ಥಳೀಯ ವೃಂದ ಸೇರಿ 64 ಹುದ್ದೆಗಳ ಭರ್ತಿ ಮಾಡಲು ಕೆಪಿಎಸ್‌ಸಿ ಅರ್ಜಿ ಆಹ್ವಾನಿಸಲಾಗಿತ್ತು. ಈ ಪ್ರಕ್ರಿಯೆ ಪೂರ್ಣಗೊಳಿಸಿ ನೇಮಕಾತಿ ಪ್ರಾಧಿಕಾರಿಯಾದ ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು ಆಯ್ಕೆ ಪಟ್ಟಿಯನ್ನು ಅಂತಿಮಗೊಳಿಸಿದ್ದಾರೆ.